ಚಿಕ್ಕಮಂಗಳೂರು ಜಿಲ್ಲೆಯಲ್ಲಿ ತೂಕ ಮತ್ತು ಅಳತೆ ದೋಷ ಪತ್ತೆ ಹಚ್ಚಿದ ಪ್ರಕರಣಗಳ ಬಗ್ಗೆ

೧೭೬೯. ಶ್ರೀ ಐ. ಬಿ. ಶಂಕರ್ (ಚಿಕ್ಕಮಗಳೂರು).—ಮಾನ್ಯ ಸಹಕಾರ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ತೂಕ ಹಾಗೂ ಅಳತೆಯ ದೋಷ ಪತ್ತೆ ಹಚ್ಚಿದ ಪ್ರಕರಣಗಳೆಷ್ಟು ?

ಆ) ಸಾರ್ವಜನಿಕರು ದೂರು ನೀಡಿದರೆ ಮಾತ್ರ ತೂಕ ಹಾಗೂ ಅಳತೆಗಳ ಪರಿಶೀಲಿಸುವುದು ಸಂಬಂಧಪಟ್ಟ ಇಲಾಖೆಯ ದಿನನಿತ್ಯದ ಕರ್ತವ್ಯವಲ್ಲವೆ ?

ಇ) ಹಾಗಿದ್ದಲ್ಲಿ ಕರ್ತವ್ಯ ಲೋಪವೆಸಗಿದವರ ಮೇಲೆ ಸರ್ಕಾರದವರು ಕೈಗೊಂಡ ಕ್ರಮಗಳೇನು ?

ಈ) ತಿಂಗಳಿಗೆ ಒಂದು ವರ್ತಿಯಾದರೂ ಜಿಲ್ಲೆಯಲ್ಲಿರುವ ಪೆಟ್ರೋಲ್ ಬಂಕ್‌ಗಳಿಗೆ ಭೇಟಿ ನೀಡಿ ಅಳತೆಯ ಬಗ್ಗೆ ಪರಿಶೀಲಿಸಿ ಸರ್ಕಾರದವರು ಕ್ರಮ ಕೈಗೊಳ್ಳುವರೇ ?

ಶ್ರೀ ಹೆಚ್. ಏಕಾಂತಯ್ಯ (ಸಹಕಾರ ಮಂತ್ರಿಗಳು).—

ಅ) ೪೦೨ ಮೊಕದ್ದಮೆಗಳು

ಆ) ಈ ಇಲಾಖೆಗೆ ಸಂಬಂಧಿಸಿದ ಕ್ಷೇತ್ರಾಧಿಕಾರಿಗಳು ಅಂದರೆ ಸಹಾಯಕ ನಿಯಂತ್ರಕರು ಹಾಗೂ ನಿರೀಕ್ಷಕರು ದಿನನಿತ್ಯದ ಕಛೇರಿಯ ಕಾರ್ಯಕ್ರಮಗಳಲ್ಲಿ ತೂಕ ಮತ್ತು ಅಳತೆಗಳನ್ನು ಪರಿಶೀಲಿಸಿ ಅವುಗಳಲ್ಲಿ ಕಂಡು ಬರುವ ನ್ಯೂನತೆಗಳ ವಿರುದ್ಧ ತಪ್ಪಿತಸ್ಥರ ಮೇಲೆ ಕಾನೂನು ಬದ್ಧವಾಗಿ ಕ್ರಮ ಕೈಗೊಳ್ಳುವ ಕಾರ್ಯಕ್ರಮವು ಒಂದಾಗಿರುತ್ತದೆ. ಸಾರ್ವಜನಿಕರು ನೀಡುವ ದೂರುಗಳನ್ನು ಗಮನಿಸುವುದೇ ಅಲ್ಲದೆ ವಿಶೇಷ ತಪಾಸಣೆ ಕೈಗೊಂಡು ತಪ್ಪಿತಸ್ಥರ ವಿರುದ್ಧ ಮೊಕದ್ದಮೆಯನ್ನು ಸಹ ಹೂಡಲಾಗುತ್ತಿದೆ.

ಇ) ಈ ಇಲಾಖೆಯ ಕ್ಷೇತ್ರಾಧಿಕಾರಿಗಳು ಈ ಬಗ್ಗೆ ಕ್ರಮ ಕೈಗೊಳ್ಳುತ್ತಿರುವುದರಿಂದ ಇದು ಉದ್ಭವಿಸುವುದಿಲ್ಲ.

ಈ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಒಟ್ಟು ೨೮ ಪೆಟ್ರೋಲ್ ಪಂಪುಗಳಿರುತ್ತವೆ. ಸದರಿ ಸಹಾಯಕ ನಿಯಂತ್ರಕರು ನಿಯತಕಾಲಿಕ ತನಿಖೆಯನ್ನು ಜಿಲ್ಲೆಯಲ್ಲಿ ಕೈಗೊಂಡು ೪೨ ಬಾರಿ ಪೆಟ್ರೋಲ್ ಬಂಕ್ ತನಿಖೆಯನ್ನು ನಡೆಸಿರುತ್ತಾರೆ ಜಿಲ್ಲೆಯ ಸಹಾಯಕ ನಿಯಂತ್ರಕರಿಗೆ ಜಿಲ್ಲೆಯಲ್ಲಿ ಬರುವ ಎಲ್ಲಾ ಪೆಟ್ರೋಲ್ ಬಂಕ್‌ಗಳನ್ನು ತಿಂಗಳಿಗೆ ಒಮ್ಮೆ ತನಿಖೆ ಮಾಡುವಂತೆ ಸೂಚನೆ ಕೊಡಲಾಗಿದೆ.

ಭೂ ಸುಧಾರಣಾ ಕಾನೂನಿನ ಸೆಕ್ಷನ್‌ಗೆ ತಿದ್ದುಪಡಿ

೨೩೨೪. ಶ್ರೀ ಸಿ. ಎಂ. ರೇವಣ್ಣಸಿದ್ದಯ್ಯ (ಸಿರಗುಪ್ಪ).—ಮಾನ್ಯ ಕಂದಾಯ, ಹಾಗೂ ಯೋಜನೆ ಮತ್ತು ಭಾರಿ ಹಾಗೂ ಮಧ್ಯಮ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕರ್ನಾಟಕ ಭೂ ಸುಧಾರಣಾ ಕಾನೂನಿನ ಸೆಕ್ಷನ್ ೫೭, ಎ,ಬಿ,ಸಿ,ಗೆ ತಿದ್ದುಪಡಿ ತರಬೇಕೆಂದು ನಿಜವೆ ?

ಆ) ಹಾಗಿದ್ದಲ್ಲಿ ಈವರೆಗೂ ಆ ತಿದ್ದುಪಡಿಗಳನ್ನು ಜಾರಿಗೆ ತರದೇ ಇರುವುದಕ್ಕೆ ಕಾರಣಗಳೇನು ?

ಇ) ಈಗಲಾದರೂ ಕರ್ನಾಟಕ ಭೂ ಸುಧಾರಣಾ ಕಾನೂನನ್ನು ಪುನರ್ ಪರಿಶೀಲಿಸಿ ಸಮಗ್ರ ತಿದ್ದುಪಡಿ ತರಲು ಸರ್ಕಾರದವರು ಕ್ರಮ ಕೈಕೊಳ್ಳುವರೆ ?

ಈ) ಹಾಗಿದ್ದಲ್ಲಿ ಎಷ್ಟು ದಿನಗಳಲ್ಲಿ ಕ್ರಮ ಕೈಗೊಳ್ಳುವರು ?

ಶ್ರೀ ಎಸ್. ಆರ್. ಬೊಮ್ಮಾಯಿ (ಕಂದಾಯ ಹಾಗೂ ...ೀಜನೆ ಮತ್ತು ಭಾರಿ ಹಾಗೂ ಮಧ್ಯಮ ನೀರಾವರಿ ಮಂತ್ರಿಗಳು.). —

ಅ) ಭೂ ಸುಧಾರಣಾ ಕಾಯ್ದೆಗೆ ಸಮಗ್ರ ತಿದ್ದುಪಡಿ ತರುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದ್ದು ಆದಷ್ಟು ಬೇಗ ಈ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು ಆ ಸಮಯದಲ್ಲಿ ಮಾನ್ಯ ಸದಸ್ಯರು ಸೂಚಿಸಿರುವ ಕಲಂಗಳ ತಿದ್ದುಪಡಿಯ ಬಗ್ಗೆ ಕೂಡ ಪರಿಶೀಲಿಸಿ ಸೂಕ್ತ ಎಂದು ಕಂಡು ಬಂದಲ್ಲಿ ತಿದ್ದುಪಡಿ ಮಾಡಲಾಗುವುದು,

ಆ) ತಿದ್ದುಪಡಿಗೊಂಡ ೧೯೭೪ರ ಕರ್ನಾಟಕ ಭೂ ಸುಧಾರಣಾ ಕಾಯಿದೆಯು ಕಳೆದ ೧೪ ವರ್ಷಗಳಿಂದ ಸಾಕಷ್ಟು ಪರಿಣಾಮಕಾರಿಯಾಗಿ ಹಾಗೂ ಸುಗಮವಾಗಿ ಕಾರ್ಯನಿರ್ವಹಿಸಿಕೊಂಡು ಹೋಗಲು ಅನುವು ಮಾಡಿಕೊಟ್ಟಿದ್ದರಿಂದ ತಿದ್ದುಪಡಿಯ ಅವಶ್ಯಕತೆ ಈವರೆಗೆ ಕಂಡು ಬರಲಿಲ್ಲ.

ಆದರೆ ಕಳೆದ ಕೆಲವು ದಿನಗಳಿಂದ ಹಲವಾರು ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರಿಂದ ಬಂದ ಅಲಾದ ಸನ್ನಿವೇಶಕ್ಕನುಗುಣವಾಗಿ ಕಾಯಿದೆಯ ಕೆಲವು ಕಲಂಗಳಿಗೆ ತಿದ್ದುಪಡಿ ಬೇಕೆಂಬ ಕೋರಿಕೆಯನ್ನು ಪರಿಗಣಿಸಿ ಸೂಕ್ತವೆಂದು ಕಂಡು ಬರುವ ಕೆಲವು ಕಲಂಗಳಿಗೆ ತಿದ್ದುಪಡಿ ತರುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಇ) 'ಆ' ಪ್ರಶ್ನೆಗೆ ಕೊಟ್ಟಿರುವ ಉತ್ತರದಿಂದ ಈ ಪ್ರಶ್ನೆಯು ಉದ್ಭವಿಸುವುದಿಲ್ಲ.

ಈ) ಆದಷ್ಟು ಬೇಗ ಕ್ರಮ ತೆಗೆದುಕೊಳ್ಳಲಾಗುವುದು.

ಆಕ್ರಮಣ ಭೂಮಿಯೆಂನ್ನು ಸಕ್ರಮಣ ಮಾಡುವ ಬಗ್ಗೆ.

೧೧೯೪. ಶ್ರೀ ಕೆ. ವಸಂತ ಬಂಗೇರ.—ಮಾನ್ಯ ಕಂದಾಯ ಯೋಜನೆ ಮತ್ತು ಭಾರಿ ಹಾಗೂ ಮಧ್ಯಮ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ಸಾವಿರಾರು ಬಡವರು ಸರ್ಕಾರಿ ಭೂಮಿಯನ್ನು ಆಕ್ರಮಣ ಮಾಡಿ ಮನೆ ಕಟ್ಟಿಕೊಂಡು ಕೃಷಿ ಮಾಡಿ ಜೀವಿಸುತ್ತಿರುವ ವಿಚಾರ ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ರಾಜ್ಯದಲ್ಲಿ ಸರ್ಕಾರಿ ಭೂಮಿ ಆಕ್ರಮಣ ಮಾಡಿ ಜೀವಿಸುತ್ತಿರುವ ಕುಟುಂಬಗಳೆಷ್ಟು ?

ಇ) ಆಕ್ರಮಣ ಮಾಡಿದ ಭೂಮಿಯನ್ನು ಅವರವರ ಹೆಸರಿಗೆ ಖಾಯಂ (ರಿಕಾರ್ಡು) ಮಾಡಲು ಸರ್ಕಾರದವರು ಉದ್ದೇಶಿಸಿದ್ದಾರೆಯೇ ?

ಈ) ಆಕ್ರಮಣ ಮಾಡಿದ ಭೂಮಿಯನ್ನು ಸಕ್ರಮಣಗೊಳಿಸಲು ತಾಲ್ಲೂಕಿಗೊಂದು ಸಮಿತಿಯನ್ನು ರಚಿಸುವುದಾಗಿ ಸರ್ಕಾರವು ತಿಳಿಸಿರುವುದೇ ?

ಉ) ಹಾಗಿದ್ದಲ್ಲಿ, ಯಾವಾಗ ಸಮಿತಿಯು ರಚನೆಯಾಗುವುದು. ಸದರಿ ಆಕ್ರಮಣವನ್ನು ಸಕ್ರಮಗೊಳಿಸಲು ತೆಗೆದುಕೊಳ್ಳುವ ಕಾಲಾವಧಿಯೆಷ್ಟು ?

ಶ್ರೀ ಎಸ್. ಆರ್. ಬೊಮ್ಮಾಯಿ (ಕಂದಾಯ ಯೋಜನೆ ಮತ್ತು ಭಾರಿ ಹಾಗೂ ಮಧ್ಯಮ ನೀರಾವರಿ ಮಂತ್ರಿಗಳು).—

ಅ) ಹೌದು.

ಆ) ಇ.ಕ್ಷ.೧೪೫೫.

ಇ) ೧.೭.೮೪ಕ್ಕಿಂತ ಹಿಂದಿನ ಆಕ್ರಮ ಸಾಗುವಳಿಗಳನ್ನು ಸಕ್ರಮಗೊಳಿಸುವ ಉದ್ದೇಶದಿಂದ ಕರಡು ಮಸೂದೆಯನ್ನು ಸದನದ ಮುಂದೆ ಇಡಲಾಗಿದೆ. ಅದಕ್ಕೆ ಒಪ್ಪಿಗೆ ದೊರೆತ ನಂತರ ಆ ಪ್ರಕಾರ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಈ) ಇಲ್ಲ.

ಉ) ಉದ್ಭವಿಸುವುದಿಲ್ಲ.